73

ಮೈಸೂರ ಗೆಜೆಟ.

ಸಂ. XXXI. ಸರ್ಕಾರದಿಂದ ಘೋಷಣೆ ಆದ್ದು. [ನಂ. 33.

ಬೆಂಗಳೂರು, ಗುರುವಾರ, ಆಗಸ್ಟ್ ತಾ॥ 20, ಸನ್ 1896.

ಹೊಸ ಪತ್ರಿಕೆ.

ಇಂಡ್ಯಾಗವರ್ನಮೆಂಟ್, ರೆಸಿಡೆಂಟರು, ಜೇಲ್ ಜಡ್ಜ್‌ಗಳು ಮತ್ತೆ ರೇರಿಂದ ಕೊಡೋಣಾದ ಇಸ್ತಿಹಾರ್ ನಾಮೆಗಳು.

ವಿದ್ಯಾಭ್ಯಾಸದ ಇಲಾಖೆ.

ಪ್ರಕಟನ ಪತ್ರಿಕೆ.

ಮೈಸೂರು ಬೇಕೇ ಪರೀಕ್ಷೆಗಳು.

ಸನ್ 1896ನೇ ಇಸವಿ ಆಗಸ್ಟ್ ತಾರೀಖು 6.

(i) ಸನ್ 1897ನೇ ಇಸವಿ ಡಿಸೆಂಬರು ತಿಂಗಳು ಮೊದಲುಗೊಂಡು ಮೈಸೂರು ಲೋವರ್ ಸೆಕಂಡರಿ ಪರೀಕ್ಷಾ ದೇಶಭಾಷಾ ಪರೀಕ್ಷೆಗಳಿಗೆ ಪ್ರವೇಶಧನವು (2—8—0) ರೂಪಾಯಿಗಳಿಗೆ ಬದಲಾಗಿ (3—0—0) ರೂಪಾಯಿಗಳಂತೆ ನಿಯಮಿಸಲ್ಪಟ್ಟಿರುತ್ತೆ.

(ii) ಸನ್ 1897ನೇ ಇಸವಿ ಡಿಸೆಂಬರು ತಿಂಗಳು ಮೊದಲುಗೊಂಡು ಮೈಸೂರು ಕರ್ಣಾಟಕ ಪಂಡಿತ ಪರೀಕ್ಷೆಗೆ ಕರ್ಣಾಟಕ ವಚನಕಾವ್ಯವು ಪೂರ್ತಿಯಾಗಿ ನಿಯಮಿಸಲ್ಪಟ್ಟಿರುತ್ತೆ.

ಎಚ್. ಜೆ. ಭಾಭಾ,
ಇನ್‌ಸ್ಪೆಕ್ಟರ್ ಜನರಲ್ ಆಫ್ ಎಡ್ಯುಕೇಷನ್.

ಬೆಂಗಳೂರ್ ಡಿಸ್ಟ್ರಿಕ್ಟ್.

ಇಸ್ತಿಹಾರ್‌ನಾಮೆ.

ತಾರೀಖು 24ನೇ ಜುಲೈ 1896ನೇ ಇಸವಿ.

ಇದರಿಂದ ಸರ್ವಸ್ತ ಜನರಿಗೂ ತಿಳಿಯಪಡಿಸುವದೇನಂದರೆ,—ಮೈನರ್ ಫಾರೆಸ್ಟ್ ಯೂನೆ ಚಿಲ್ಲರೆ ಪಸಾರೆ ಮತ್ತು ಮರವಳ್ಳಿ ಫಸಲಿನ ಹರಾಜು ವಿಷಯದಲ್ಲಿ ನಾದಕ್ಕಾಡಲ್ಪಟ್ಟಿರುವ 1895ನೇ ಇಸವಿ ಜನವರಿ 31ನೇ ಮಕ್ಕಂ ಮೈಸೂರ್ ಗೆಜೆಟ್ಟಿನ 2ನೇ ಭಾಗದಲ್ಲಿ ಘೋಷಿತವಾಗಿರುವ ಆದೇ ಇಸವಿ ಜನವರಿ 23ನೇ ದಿನಕ್ಕಂ ಇಸ್ತಿಹಾರನ್ನು ಬದಲಾಯಿಸಿ ಅಮಲ್‌ದಾರ್ ಮತ್ತು ಸವಾಲ್‌ದಾರ್‌ಗಳ ನಡವಳಿಕೆ ಬಗ್ಗೆ ಈ ಕೆಳಗೆ ನಮೂದುಗುವ ತೂಜು ಇಸ್ತಿಹಾರ್ ಪ್ರಕಟಿಸಲ್ಪಟ್ಟಿರುತ್ತೆ.

(1) ಕಾರ್ತೀಕ ಮತ್ತು ವೈಶಾಖಿ ಫಸಲ್‌ಗಳು ಬೇರೆ ಬೇರೆ ಯರಡು ಕಾಲಗಳಲ್ಲಿ ಹರಾಜು ಮಾಡಲ್ಪಡುತ್ತವೆ.